ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2017–18 ದಿನಾಂಕ: 18–9–2017

# ಪತ್ರಿಕಾ ಪ್ರಕಟಣೆ

ಸಂಖ್ಯೆ 94/214

## ಮಾಜಿ ಸಚಿವ ಖಮರುಲ್ ಇಸ್ಲಾಂ ಅವರ ನಿಧನಕ್ಕೆ ಮುಖ್ಯಮಂತ್ರಿ ಸಂತಾಪ

ಬೆಂಗಳೂರು, ಸೆಪ್ಟೆಂಬರ್ 18 ( ಕರ್ನಾಟಕ ವಾರ್ತೆ) :

ಮಾಜಿ ಸಚಿವ ಖಮರುಲ್ ಇಸ್ಲಾಂ ಅವರ ನಿಧನಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ.

ಆರು ಬಾರಿ ಶಾಸಕರಾಗಿ ಹಾಗೂ ಒಮ್ಮೆ ಸಂಸದರಾಗಿ ಆಯ್ಕೆಯಾಗಿದ್ದ ಖಮರುಲ್ ಇಸ್ಲಾಂ ಅವರು ಹೈದರಾಬಾದ್–ಕರ್ನಾಟಕ ಪ್ರದೇಶ ಭಾಗದಲ್ಲಿ ಅತ್ಯಂತ ಜನಪ್ರಿಯ ಜನ ನಾಯಕರಾಗಿದ್ದರು. ಎಸ್ ಎಂ ಕೃಷ್ಣ ಸಂಪುಟದಲ್ಲಿ ವಸತಿ ಹಾಗೂ ಕಾರ್ಮಿಕ ಖಾತೆಯನ್ನು ನಿರ್ವಹಿಸಿದ್ದ ಖಮರುಲ್ ಇಸ್ಲಾಂ ಅವರು ನನ್ನ ಸಚಿವ ಸಂಪುಟದಲ್ಲಿ ಪೌರಾಡಳಿತ, ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರಾಗಿ ಸೇವೆ ಸಲ್ಲಿಸಿದ್ದರು. ಅಲ್ಪ ಸಂಖ್ಯಾತರ ಕಲ್ಯಾಣ ಹಾಗೂ ಹೈದರಾಬಾದ್–ಕರ್ನಾಟಕದ ಅಭಿವೃದ್ಧಿ ಖಮರುಲ್ ಇಸ್ಲಾಂ ಅವರ ಹೃದಯಕ್ಕೆ ಸದಾ ಹತ್ತಿರವಾಗಿತ್ತು.

ಅಲ್ಪಸಂಖ್ಯಾತರ ಕಲ್ಯಾಣ ಸಚಿವರಾಗಿದ್ದ ಸಂದರ್ಭದಲ್ಲಿ ಬಿದಾಯಿ ಯೋಜನೆಯ ಪರಿಣಾಮಕಾರಿ ಅನುಷ್ಠಾನಕ್ಕೆ ಪುಷ್ಠಿ ನೀಡಿದ್ದರು. ರಾಷ್ಟ್ರದ ಗಮನ ಸೆಳೆದ ಈ ಯೋಜನೆಯನ್ನು ಇದೀಗ ಕೇಂದ್ರ ಸರ್ಕಾರವೇ ಅನುಕರಿಸಲು ಹೊರಟಿದೆ !

ನಮ್ಮ ಸರ್ಕಾರವು ಅಸ್ತಿತ್ವಕ್ಕೆ ಬರುವ ಮುನ್ನ ರಾಜ್ಯದಲ್ಲಿದ್ದ ಅಲ್ಪಸಂಖ್ಯಾತರ ವಸತಿ ನಿಲಯಗಳ ಸಂಖ್ಯೆಗೆ ಪ್ರಸ್ತುತ ಇರುವ ವಸತಿ ನಿಲಯಗಳ ಸಂಖ್ಯೆಯನ್ನು ಹೋಲಿಕೆ ಮಾಡಿದಲ್ಲಿ ದುಪ್ಪಟ್ಟು–ಮುಪ್ಪಟ್ಟು ಆಗಿದೆ ಎಂಬುದು ಇದೀಗ ಇತಿಹಾಸ. ಇದರ ಹಿಂದೆ ಖಮರುಲ್ ಇಸ್ಲಾಂ ಅವರ ಶ್ರಮ ಹಾಗೂ ಪರಿಶ್ರಮವೂ ಇತ್ತು ಎಂಬುದು ಸಾರ್ವಜನಿಕ ಸತ್ಯ.

ಮೈಸೂರು ಹುಲಿ ಟಿಪ್ಪೂ ಸುಲ್ತಾನ್ ಅವರು ಸಾರ್ವಜನಿಕ ಸೊತ್ತು. ಬ್ರಿಟೀಷರ ವಿರುದ್ಧ ಪ್ರಪ್ರಥಮ ಬಾರಿಗೆ ಸ್ವಾತಂತ್ರ್ಯದ ರಣ ಕಹಳೆ ಮೊಳಗಿಸಿದ

ಟಿಪ್ಪೂ ಅವರನ್ನು ಒಂದು ನಿದಿಷ್ಟ ಸಮುದಾಯಕ್ಕೆ ಬಂಧಿಸಿಡಬಾರದು. ಟಿಪ್ಪೂ ಅವರಲ್ಲಿದ್ದ ಜಾತ್ಯಾತೀತ ಪರಿಕಲ್ಪನೆಗಳನ್ನು ಎಲ್ಲರಿಗೂ ತಲುಪಿಸಬೇಕು ಎಂಬ ಸದಾಶಯದೊಂದಿಗೆ ಟಿಪ್ಪೂ ಜಯಂತಿ ಸಂಭ್ರಮಾಚರಣೆಗೆ ನಮ್ಮ ಸರ್ಕಾರವು ಚಾಲನೆ ನೀಡಲು ಖಮರುಲ್ ಇಸ್ಲಾಂ ಅವರ ಒತ್ತಾಸೆ ಹಾಗೂ ಒತ್ತಡವೂ ಕಾರಣ.

ಖಮರುಲ್ ಇಸ್ಲಾಂ ಅವರ ನಿಧನದಿಂದ ಅಲ್ಪಸಂಖ್ಯಾತರ ಸಮುದಾಯದ ಶ್ರೇಯೋಭಿವೃದ್ಧಿಗೆ ಸದಾ ಕಾಲ ಶ್ರಮಿಸುತ್ತಿದ್ದ ವಿಶೇಷ ಚೇತನವೊಂದು ಕಮರಿದಂತಾಗಿದೆ ಎಂದು ಸಿದ್ದರಾಮಯ್ಯ ಅವರು ಬಣ್ಣಿಸಿದ್ದಾರೆ.

ಖಮರುಲ್ ಇಸ್ಲಾಂ ಅವರ ಆತ್ಮಕ್ಕೆ ಶಾಂತಿ ಲಭಿಸಲಿ. ಖಮರುಲ್ ಇಸ್ಲಾಂ ಅವರ ಅಪಾರ ಬಂಧುಗಳು, ಅಭಿಮಾನಿಗಳಿಗೆ ಈ ಹಿರಿಯ ನಾಯಕನ ಅಗಲಿಕೆಯಿಂದ ಉಂಟಾದ ದುಃಖ ಮತ್ತು ನೋವನ್ನು ಭರಿಸುವ ಶಕ್ತಿಯನ್ನು ದೇವರು ದಯಪಾಲಿಸಲಿ ಎಂದು ಸಿದ್ದರಾಮಯ್ಯ ಅವರು ತಮ್ಮ ಸಂದೇಶದಲ್ಲಿ ತಿಳಿಸಿದ್ದಾರೆ.

***************

ಡಿ ಪಿ ಎಂ

## ಸಭಾಪತಿ ಡಿ.ಹೆಚ್. ಶಂಕರಮೂರ್ತಿ ಅವರ ಸಂತಾಪ

ಕಾಂಗ್ರೆಸ್ ಪಕ್ಷದ ಹಿರಿಯ ರಾಜಕಾರಣಿ ಖಮರುಲ್ ಇಸ್ಲಾಂ ಅವರ ನಿಧನಕ್ಕೆ ಕರ್ನಾಟಕ ವಿಧಾನ ಪರಿಷತ್ತು ಸಭಾಪತಿ ಡಿ.ಹೆಚ್. ಶಂಕರಮೂರ್ತಿ ಅವರು ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ.

ಆರು ಬಾರಿ ಶಾಸಕರಾಗಿ, ಒಮ್ಮೆ ಲೋಕಸಭಾ ಸದಸ್ಯರಾಗಿ, ಸಚಿವರಾಗಿ ಉತ್ತಮ ಸಂಸದೀಯ ಪಟುವಾಗಿ ಸಲ್ಲಿಸಿದ ಸೇವೆ ಸ್ಮರಣೀಯ, ದಯಮಯನಾದ ಭಗವಂತನು ಮೃತರ ಆತ್ಮಕ್ಕೆ ಚಿರಶಾಂತಿಯನ್ನು ಮತ್ತು ಅವರ ಕುಟುಂಬಕ್ಕೆ ದು:ಖವನ್ನು ಭರಿಸುವ ಶಕ್ತಿಯನ್ನು ಕರುಣಿಸಲೆಂದು ತುಂಬು ಹೃದಯದಿಂದ ಪ್ರಾರ್ಥಿಸುವುದಾಗಿ ಸಭಾಪತಿ ಅವರು ತಮ್ಮ ಶೋಕ ಸಂದೇಶದಲ್ಲಿ ತಿಳಿಸಿದ್ದಾರೆ.

## ಸಭಾಧ್ಯಕ್ಷ ಕೆ.ಬಿ. ಕೋಳಿವಾಡ್ ಸಂತಾಪ

**ಸರಳ, ಸೌಮ್ಯ ಸ್ವಭಾವಕ್ಕೆ ಹೆಸರುವಾಸಿಯಾಗಿದ್ದು ಹೈದರಾಬಾದ್ ಕರ್ನಾಟಕ ಅಭಿವೃದ್ಧಿ ಹಾಗೂ 371 (ಜೆ) ಮೀಸಲಾತಿಯನ್ನು ಹೋರಾಟ ಮಾಡಿದ ಖಮರುಲ್ ಇಸ್ಲಾಂ ಅವರ ನಿಧನದ ವಾರ್ತೆ ತುಂಬಾ ದು:ಖ ತಂದಿದೆ ಅವರ ಆತ್ಮಕ್ಕೆ ಶಾಂತಿಯನ್ನು ಮತ್ತು ಅವರ ಕುಟುಂಬದವರಿಗೆ ದು:ಖವನ್ನು ಭರಿಸುವ ಶಕ್ತಿ ನೀಡಲೆಂದು ಸಭಾಧ್ಯಕ್ಷ ಕೆ.ಬಿ. ಕೋಳಿವಾಡ್ ಅವರು ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ.**

## ಪ್ರಮೋದ್ ಮಧ್ವರಾಜ್ ಸಂತಾಪ

**ಆರು ಭಾರಿ ಶಾಸಕರಾಗಿ, ಒಂದು ಭಾರಿ ಸಂಸದರಾಗಿ, ಎಸ್.ಎಮ್ ಕೃಷ್ಣ ಹಾಗೂ ಶ್ರೀ ಸಿದ್ಧಾರಾಮಯ್ಯ ರವರ ನೇತ್ರತ್ವದ ಕಾಂಗ್ರೆಸ್ ಸರಕಾರದಲ್ಲಿ ಸಚಿವರಾಗಿ ಕಾರ್ಯನಿರ್ವಹಿಸಿದ ಹಿರಿಯ ಮುತ್ಸದಿ ಅಲ್ಪಸಂಖ್ಯಾತ ನಾಯಕ ಖಮರುಲ್ ಇಸ್ಲಾಂ ರವರು ವಿಧಿವಶರಾಗಿರುದ್ದಕ್ಕೆ ಸಚಿವ ಪ್ರಮೋದ್ ಮಧ್ವರಾಜ್ ರವರು ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ.**

## ಶ್ರೀಮತಿ ಉಮಾಶ್ರೀ ಅವರ ಸಂತಾಪ

**ಹಿರಿಯ ಕಾಂಗ್ರೆಸ್ ನಾಯಕ ಖಮರುಲ್ ಇಸ್ಲಾಂ ಅವರ ನಿಧನಕ್ಕೆ ಕನ್ನಡ ಮತ್ತು ಸಂಸ್ಕೃತಿ ಸಚಿವೆ ಶ್ರೀಮತಿ ಉಮಾಶ್ರೀ ಅವರು ತೀವ್ರ ಶೋಕ ವ್ಯಕ್ತಪಡಿಸಿದ್ದಾರೆ. ಸ್ನೇಹಮಯಿ, ಹಸನ್ಮುಖಿ ಖಮರುಲ್ ಇಸ್ಲಾಂ ಅವರ ನಿಧನದಿಂದ ಕಾಂಗ್ರೆಸ್ ಪಕ್ಷ ಒಬ್ಬ ಜನಾನುರಾಗಿ ನಾಯಕನ್ನು ಕಳೆದುಕೊಂಡಂತಾಗಿದೆ ಎಂದು ಅವರು ತಮ್ಮ ಶೋಕ ಸಂದೇಶದಲ್ಲಿ ತಿಳಿಸಿದ್ದಾರೆ.**

## ಲೋಕೋಪಯೋಗಿ ಸಚಿವ ಮಹದೇವಪ್ಪ ಸಂತಾಪ

ಮಾಜಿ ಸಚಿವ ಖಮರುಲ್ ಇಸ್ಲಾಂ ಅವರ ನಿಧನಕ್ಕೆ ಲೋಕೋಪಯೋಗಿ ಸಚಿವ ಡಾ: ಹೆಚ್.ಸಿ. ಮಹದೇವಪ್ಪ ಅವರು ತೀವ್ರ ಶೋಕ ವ್ಯಕ್ತಪಡಿಸಿದ್ದಾರೆ. ಶ್ರೀಯುತರು ಅಲ್ಪ ಸಂಖ್ಯಾತರ ಸಮುದಾಯದ ಶ್ರೇಯೋಭಿವೃದ್ಧಿಗೆ ಸದಾ ಶ್ರಮಿಸುತ್ತಿದ್ದರು. ಅವರ ಆತ್ಮಕ್ಕೆ ಶಾಂತಿ ದೊರಕಲಿ ಅವರ ಕುಟಂಬಕ್ಕೆ ಬಂದುಗಳಿಗೆ ಅವರ ಅಗಲಿಕೆಯಿಂದ ಉಂಟದ ದು:ಖ ಮತ್ತು ನೋವನ್ನು ಭರಿಸುವ ಶಕ್ತಿ ಲಭಿಸಲೆಂದು ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ.

# ಬಾಬುರಾವ್ ಚಿಂಚನಸೂರ್ ಸಂತಾಪ

ಮಾಜಿ ಸಚಿವ ಖಮರುಲ್ ಇಸ್ಲಾಂ ಅವರ ನಿಧನಕ್ಕೆ ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಬಾಬುರಾವ್ ಚಿಂಚನಸೂರ್ ಅವರು ತೀವ್ರ ಶೋಕ ವ್ಯಕ್ತಪಡಿಸಿದ್ದಾರೆ. ಶ್ರೀಯುತರು ಹೈದ್ರಾಬಾದ್ ಕರ್ನಾಟಕ ಅಭಿವೃದ್ಧಿಯಲ್ಲಿ ವಿಶೇಷವಾಗಿ ಕಲಬುರಗಿ ಜಿಲ್ಲೆಯಲ್ಲಿ ಅನೇಕ ಅಭಿವೃದ್ಧಿ ಕಾರ್ಯಗಳಿಗೆ ಅವರು ಪಟ್ಟ ಶ್ರಮ ವಹಿಸಿದ ಕಾಳಜಿ ಶ್ಲಾಘನೀಯ. ಅವರ ನಿಧನದಿಂದ ನನಗೆ ಅತೀವ ದುಖ:ವಾಗಿದೆ ಅವರ ಕುಟುಂಬ ವರ್ಗಕ್ಕೆ ಅವರ ಅಗಲಿಕೆಯಿಂದ ಉಂಟದ ದು:ಖ ಮತ್ತು ನೋವನ್ನು ಭರಿಸುವ ಶಕ್ತಿ ಲಭಿಸಲೆಂದು ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ.

## ಈಶ್ವರ್ ಖಂಡ್ರೆ ಸಂತಾಪ

**ಮಾಜಿ ಸಚಿವರು, ಹಿರಿಯ ಕಾಂಗ್ರೆಸ್ ನಾಯಕರಾದ ಖಮರುಲ್ ಇಸ್ಲಾಂ ಇವರ ಹಠಾತ್ ನಿಧನಕ್ಕೆ ರಾಜ್ಯದ ಪೌರಾಡಳಿತ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವ ಈಶ್ವರ್ ಬಿ. ಖಂಡ್ರೆ ಅವರು ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ.**

**ಗುಲ್ಬರ್ಗದವರಾದ ಖಮರುಲ್ ಇಸ್ಲಾಂ ಅವರು ಹೈದರಾಬಾದ್–ಕರ್ನಾಟಕ ಪ್ರದೇಶದ ಅಭಿವೃದ್ಧಿಗೆ ನೀಡಿದ ಕೊಡುಗೆ ಅಮೂಲ್ಯವಾದುದು. ಅವರ ನಿಧನನಿಂದ ಅವರ ಕುಟುಂಬಕ್ಕೆ ಅಷ್ಟೆ ಅಲ್ಲದೆ ಹೈದರಾಬಾದ್–ಕರ್ನಾಟಕ ಪ್ರದೇಶಕ್ಕೆ ದೊಡ್ಡ ನಷ್ಟ ಉಂಟಾಗಿದೆ ಅವರ ಆತ್ಮಕ್ಕೆ ಶಾಂತಿ ಕೋರುತ್ತೇನೆ ಎಂದು ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ.**

**ಸಂಖ್ಯೆ 95/215**

## ಗಣಕಯಂತ್ರ ಶಿಕ್ಷಣ ಪರೀಕ್ಷೆಯ ಫಲಿತಾಂಶ

ಬೆಂಗಳೂರು, ಸೆಪ್ಟೆಂಬರ್ 18 ( ಕರ್ನಾಟಕ ವಾರ್ತೆ) :

ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು ಅವು ಜುಲೈ 2017 ರ ಮಾಹೆಯಲ್ಲಿ ನಡೆಸಿದ ಗಣಕಯಂತ್ರ ಶಿಕ್ಷಣ ಪರೀಕ್ಷೆಯ ಫಲಿತಾಂಶವನ್ನು ಸೆಪ್ಟೆಂಬರ್ 21 ರಂದು ಮಂಡಳಿಯ ವೆಬ್‌ಸೈಟ್ www.kseeb.kar.nic.in ನಲ್ಲಿ ಪ್ರಕಟಿಸಲಿದೆ. ಶಾಲಾವಾರು ಪಟ್ಟಿಯನ್ನು ಈಗಾಗಲೇ ಶೀಘ್ರ ಅಂಚೆ ಮೂಲಕ ಸಂಬಂಧಿಸಿದ ಸಂಸ್ಥೆಗಳಿಗೆ ಕಳುಹಿಸಲಾಗಿದೆ. ಫಲಿತಾಂಶವನ್ನು ಸೆಪ್ಟೆಂಬರ್ 22 ರಂದು 2–00 ಗಂಟೆಗೆ ರಾಜ್ಯದ ಎಲ್ಲಾ ಗಣಕಯಂತ್ರ ಶಿಕ್ಷಣ ಸಂಸ್ಥೆಗಳಲ್ಲಿ ಪ್ರಕಟಿಸುವಂತೆ ಸಂಸ್ಥೆಯ ಪ್ರಾಂಶುಪಾಲರುಗಳಿಗೆ ಸೂಚಿಸಲಾಗಿದೆ ಎಂದು ನಿರ್ದೇಶಕರು, ಇತರೆ ಪರೀಕ್ಷೆಗಳು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಸಂಖ್ಯೆ 96/216**

## ವಾಣಿಜ್ಯ ಪರೀಕ್ಷೆಯ ಫಲಿತಾಂಶ

ಬೆಂಗಳೂರು, ಸೆಪ್ಟೆಂಬರ್ 18 ( ಕರ್ನಾಟಕ ವಾರ್ತೆ) :

ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು ಅವು ಜುಲೈ 2017 ರ ಮಾಹೆಯಲ್ಲಿ ನಡೆಸಿದ ವಾಣಿಜ್ಯ ಪರೀಕ್ಷೆಯ ಫಲಿತಾಂಶವನ್ನು ಸೆಪ್ಟೆಂಬರ್ 21 ರಂದು ಮಂಡಳಿಯ ವೆಬ್‌ಸೈಟ್ www.kseeb.kar.nic.in ನಲ್ಲಿ ಪ್ರಕಟಿಸಲಿದೆ. ಶಾಲಾವಾರು ಪಟ್ಟಿಯನ್ನು ಈಗಾಗಲೇ ಶೀಘ್ರ ಅಂಚೆ ಮೂಲಕ ಸಂಬಂಧಿಸಿದ ಸಂಸ್ಥೆಗಳಿಗೆ ಕಳುಹಿಸಲಾಗಿದೆ. ತಲುಪಿದ ತಕ್ಷಣವೇ ಆಯಾ

ವಾಣಿಜ್ಯ ಸಂಸ್ಥೆಗಳ ಪ್ರಕಟಣಾ ಫಲಕದಲ್ಲಿ ಪ್ರಕಟಿಸಲು ಸೂಚಿಸಿದೆ ಎಂದು ನಿರ್ದೇಶಕರು, ಇತರೆ ಪರೀಕ್ಷೆಗಳು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪತ್ರಕರ್ತರ ಕುಟುಂಬ ಮಾಸಾಶನ ಮೊತ್ತ ಹೆಚ್ಚಳ

ಬೆಂಗಳೂರು, ಸೆಪ್ಟೆಂಬರ್ 18 ( ಕರ್ನಾಟಕ ವಾರ್ತೆ) :

ರಾಜ್ಯ ಸರ್ಕಾರವು ಮೃತ ಪತ್ರಕರ್ತರ ಕುಟುಂಬಕ್ಕೆ ನೀಡುವ ಮಾಸಾಶನವನ್ನು ತಿಂಗಳಿಗೆ ಒಂದು ಸಾವಿರ ರೂ.ಗಳಿಂದ ಮೂರು ಸಾವಿರ ರೂಪಾಯಿಗಳಿಗೆ ಹೆಚ್ಚಿಸಿ ಆದೇಶ ಹೊರಡಿಸಿದೆ.